## ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಬಸವನ-ಬಾಗೇವಾಡಿ

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆಃ 1353/2024**

**ಚಾ.ಸಾ - 13**

**ಪ್ರಾ.ಸಾ- 8**

**ಸಾಕ್ಷಿಗೆ ದಿನಾಂಕ 29.01.2026 ರಂದು ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | ಃ | ಮನೋಹರ ಕಂಚಗಾರ |
| ತಂದೆಯ ಹೆಸರು | ಃ | ರಾಮಚಂದ್ರ |
| ವಯಸ್ಸು | ಃ | 54 ವರ್ಷ |
| ಉದ್ಯೋಗ | ಃ | ಪಿ.ಎಸ್.ಐ |
| ಠಾಣೆವಾಸಸ್ಥಳ | ಃ | ಬ.ಬಾಗೇವಾಡಿ |

**ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ**

ನಾನು ದಿಃ14.06.2024 ರಿಂದ ಇಲ್ಲಿಯವರೆಗೂ ಬ.ಬಾಗೇವಾಡಿ ಪೋಲಿಸ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿಃ 29.01.2024 ರಂದು ನಾನು ಠಾಣಾ ಕರ್ತವ್ಯದಲ್ಲಿ ಇದ್ದಾಗ ಚಾ.ಸಾ. 1 ರವರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಪಡೆದುಕೊಂಡು, ಠಾಣಾ ಮೊ.ನಂಬರ 28/2024 ರಂತೆ ಪ್ರಕರಣವನ್ನು ದಾಖಲಿಸಿ, ಪ್ರ.ವ.ವರದಿಯನ್ನು ನನ್ನ ಮೇಲಾಧಿಕಾರಿಗಳಿಗೆ ಮತ್ತು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಸಾಕ್ಷಿಯು ದೂರನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ **ನಿಪಿ-5** ಎಂದು ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-5 ಬಿ** ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರ.ವ.ವ ನೋಡಿ ಗುರುತಿಸಿದ್ದು, ಅದನ್ನು **ನಿಪಿ-11** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-11 ಎ** ಎಂದು ಗುರುತಿಸಲಾಯಿತು.

3. ದಿಃ30.01.2024 ರಂದು ಮೃತ ಕರಿಯಪ್ಪನ ಶವ ಪಂಚನಾಮೆಯನ್ನು ಚಾಸಾ 2 ಮತ್ತು 3 ರವರು ಸಮಕ್ಷಮ ಜರುಗಿಸಿರುತ್ತೇನೆ. ಸಾಕ್ಷಿಯು ಶವ ಪಂಚನಾಮೆಯನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ **ನಿಪಿ-8** ಎಂದು ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-8 ಎ** ಎಂದು ಗುರುತಿಸಲಾಯಿತು. ಅದೇ ದಿನ ಅಪಘಾತದ ಸ್ಥಳಕ್ಕೆ ಭೇಟಿ

ನೀಡಿ ಇಬ್ಬರು ಪಂಚರಾದ ಚಾಸಾ-4 ಮತ್ತು 5 ರವರ ಸಮಕ್ಷಮ ಸ್ಥಳ ಪಂಚನಾಮೆಯನ್ನು ಜರುಗಿಸಿರುತ್ತೇನೆ. ಸಾಕ್ಷಿಯು ಮಹಜರನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ **ನಿಪಿ-6** ಎಂದು ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-6 ಸಿ** ಎಂದು ಗುರುತಿಸಲಾಯಿತು. ಸ್ಥಳದಲ್ಲಿ ತಗೆದ ಪೋಟೋವನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-7 ಎಂದು ಗುರುತಿಸಲಾಗಿರುತ್ತದೆ. ಸಾಕ್ಷಿಯ ಸಹಿಯನ್ನು **ನಿಪಿ-7 ಎ** ಎಂದು ಗುರುತಿಸಲಾಯಿತು. ಸ್ಥಳದಲ್ಲಿ ಕಚ್ಚಾ ನಕಾಶೆಯನ್ನು ತಯಾರಿಸಿರುತ್ತೇನೆ. ಸಾಕ್ಷಿ ಅದನ್ನು ನೋಡಿ ಗುರುತಿಸಿದ್ದು, ಅದನ್ನು **ನಿಪಿ-12** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿಪಿ-12 ಎ** ಎಂದು ಗುರುತಿಸಲಾಯಿತು. ಅದೇ ದಿನ ಚಾಸಾ-6 ರಿಂದ 10 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ. ಕಡತವನ್ನು ಚಾಸಾ 14 ರವರಿಗೆ ಮುಂದಿನ ತನಿಖೆಗೋಸ್ಕರ ವಹಿಸಿಕೊಟ್ಟಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಎನ್.ಎಸ್.ಬಿ. ವಕೀಲರಿಂದ**

4. ದೂರನ್ನು ಚಾಸಾ 1 ರವರ ಹೇಳಿಕೆಯ ಮೇರೆಗೆ ನಮ್ಮ ಠಾಣೆಯಲ್ಲಿ ಟೈಪ ಮಾಡಿಸಲಾಗಿರುತ್ತದೆ. ಶವ ಪಂಚನಾಮೆ ಜರುಗಿಸಿದ ನಂತರ ಸ್ಥಳ ಪಂಚನಾಮೆ ಜರುಗಿಸಿರುತ್ತೇನೆ. ಚಾಸಾ 2 ಮತ್ತು 3 ರವರು ಟಕ್ಕಳಕಿ ಗ್ರಾಮದವರು. ಸದರಿಯವರು ಸ್ಥಳದಲ್ಲಿ ಇರುವ ಕಾರಣ ಪಂಚರಾಗಿ ಸಹಕರಿಸಿಕೊಂಡಿರುತ್ತೇವೆ. ಮೂರಾರ್ಜಿ ಶಾಲೆಯ ಹತ್ತಿರ ರೋಡ ಬ್ರೇಕ್ ಇರುತ್ತದೆ ಎಂದರೆ ಸರಿ. ರೋಡ ಬ್ರೇಕ್ ಇರುವ ಕಾರಣ ಮೃತ ಕರಿಯಪ್ಪ ಕೆಳಗೆ ಬಿದ್ದು ಅಪಘಾತಪಡಿಸಿಕೊಂಡಿರುತ್ತಾನೆ ಎಂದರೆ ಸರಿಯಲ್ಲ. ನಾನು ಯಾವುದೇ ಮಹಜರ ಕ್ರಮ ಜರುಗಿಸಿಲ್ಲ ಎಂದರೆ ಸರಿಯಲ್ಲ. ದೂರನ್ನು ನಾನೆ ತಯಾರಿಸಿರುತ್ತೇನೆ ಎಂದರೆ ಸರಿಯಲ್ಲ. ಕಚ್ಚಾ ನಕಾಶೆಯನ್ನು ನನ್ನ ತನಿಖಾ ಸಹಾಯಕರು ತಗೆದಿರುತ್ತಾರೆ. ತನಿಖಾ ಸಹಾಯಕರ ಪ್ರಮಾಣ ಪತ್ರವನ್ನು ಪಡೆದುಕೊಂಡಿಲ್ಲ. ನಾನು ಸ್ಥಳಕ್ಕೆ ಹೋಗಿಲ್ಲ ಎಂದರೆ ಸರಿಯಲ್ಲ. ನಾನು ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಆರೋಪಿ ಯಾವುದೇ ತಪ್ಪು ಇರದೆ ಇದ್ದರು ಸಹ ಮೃತ ಕುಟುಂಬಕ್ಕೆ ಸಹಾಯ ಮಾಡಲು ಸುಳ್ಳು ಪ್ರಕರಣ ದಾಖಲಿಸಿಕೊಂಡು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತಕ್ಕೂ ಆರೋಪಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಅದೆ.

(ಅಮಿತ್ ಘಟ್ಟಿ)

ದಿವಾಣಿ ನ್ಯಾಯಾಧೀಶರು ಮತ್ತು

ನ್ಯಾಯಿಕ ದಂಡಾಧಿಕಾರಿಗಳು

ಬಸವನ ಬಾಗೇವಾಡಿ.